# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
## <u>ಕಾರ್ಯಕಲಾಪಗಳ ಪಟ್ಟಿ</u>
## ಗುರುವಾರ, ದಿನಾಂಕ: 16ನೇ ಮಾರ್ಚ್, 2017
## (ಸಮಯ: ಬೆಳಗ್ಗೆ 11.00 ಗಂಟೆಗೆ)

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 03. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀಮತಿ ಮೋಟಮ್ಮ** ಅವರು ಚಿಕ್ಕಮಗಳೂರು ಜಿಲ್ಲೆಯಲ್ಲಿ ತರೀಕೆರೆಯಿಂದ ಕೆಮ್ಮಣ್ಣುಗುಂಡಿವರೆಗಿನ ರಸ್ತೆಯು ಹಾಳಾಗಿ ಕೆಮ್ಮಣ್ಣುಗುಂಡಿ ಗಿರಿಧಾಮಕ್ಕೆ ಬರುವ ಪ್ರವಾಸಿಗರಿಗೆ ತೊಂದರೆಯುಂಟಾಗಿರುವ ಹಾಗೂ ಪ್ರವಾಸಿಗರಿಗೆ ಸೂಕ್ತ ಮೂಲ ಸೌಕರ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಎಂ.ಕೆ. ಪ್ರಾಣೇಶ್** ಅವರು ರಾಜ್ಯಾದ್ಯಂತ ಕೃಷಿ ಜಮೀನಿನಲ್ಲಿ ಅನಧಿಕೃತವಾಗಿ ಬಡಾವಣೆ ನಿರ್ಮಿಸಿ ನೋಂದಣಿ ಮಾಡುತ್ತಿರುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಪುಟ್ಟಣ್ಣ** ಅವರು ರಾಜ್ಯದಲ್ಲಿ ಖಾಸಗಿ ಕೇಬಲ್ ನೆಟ್‌ವರ್ಕ್ ಏಜೆನ್ಸಿಗಳು ಸಾರ್ವಜನಿಕರಿಂದ ಹೆಚ್ಚಿನ ಹಣವನ್ನು ಸುಲಿಗೆ ಮಾಡುತ್ತಿರುವ ಬಗ್ಗೆ ಕಟ್ಟುನಿಟ್ಟಿನ ಕಾನೂನು ರೂಪಿಸುವ ಹಾಗೂ ಸರ್ಕಾರದಿಂದಲೇ ಕೇಬಲ್ ನೆಟ್‌ವರ್ಕ್ ವ್ಯವಸ್ಥೆಯನ್ನು ಜಾರಿಗೆ ತಂದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

## ೦4. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ(ಅಣ್ಣಯ್ಯ)** ಅವರು ಶಿಕ್ಷಣ ಇಲಾಖೆ ಶಾಲಾ ಸಮವಸ್ತ್ರಗಳ ದರ ಕಡಿತ ಮಾಡಿರುವುದರಿಂದ ರಾಜ್ಯದ ನೇಕಾರರು ಉದ್ಯೋಗ ತೊರೆದು ವಲಸೆ ಹೋಗುವ ಪರಿಸ್ಥಿತಿ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)**

**ಆ) ಶ್ರೀ ರಾಮಚಂದ್ರ ಗೌಡ** ಅವರು ಬಿ.ಬಿ.ಎಂ.ಪಿ., ವ್ಯಾಪ್ತಿಯಲ್ಲಿರುವ ಜೀವಂತ ಕೆರೆಗಳು, ರಸಾಯನಿಕ ಹಾಗೂ ಕೈಗಾರಿಕಾ ತ್ಯಾಜ್ಯ ವಸ್ತುಗಳಿಂದ ಮಲಿನಗೊಂಡು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. (**ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು**)

## ೦5. ವಿತ್ತೀಯ ಕಾರ್ಯಕಲಾಪ

2017-2018ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**